**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕರ್ನಾಟಕ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು 2023-24ನೇ ಸಾಲಿಗೆ ಸಂಯೋಜನಾ ಪ್ರಸ್ತಾವನೆಗಳನ್ನು UUCMS (Unified University & College Management System) ತಂತ್ರಾಂಶದಲ್ಲಿ ಸಲ್ಲಿಸಲು ಕಾಲಾವಧಿ ವಿಸ್ತರಿಸುವ ಬಗ್ಗೆ.- ಆದೇಶ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಇಡಿ 47 ಯುಎನ್ಇ 2023, ದಿನಾಂಕ: 05.04.2023.

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ, 2023-24ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯು ಅಭಿವೃದ್ಧಿಪಡಿಸಿರುವ UUCMS ತಂತ್ರಾಂಶದ ಮುಖಾಂತರವೇ ಆನ್‌ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಗಳನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020ರಂತೆ ಆಹ್ವಾನಿಸಲು, ಉನ್ನತ ಶಿಕ್ಷಣ ಇಲಾಖೆಯಡಿಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ Opening new colleges, Extension of existing affiliation, Continuation of affiliation, Permanent affiliation, Change/Addition of subject, Division of faculty, Increase of intake, Change of name, Change of place, Closure and withdrawal of a college, Local inquiry committee formation and Transfer of management ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ, ವಿಶ್ವವಿದ್ಯಾಲಯವು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ, ಸಮಿತಿಯ ಶಿಫಾರಸ್ಸನ್ನು ಆನ್‌ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ವಿವಿಧ ಸಂಯೋಜನೆಗೆ ಸಂಬಂಧಿಸಿದ ಶುಲ್ಕಗಳನ್ನು ತಂತ್ರಾಂಶದಲ್ಲಿ ನಿಗದಿಪಡಿಸಿ ಸರ್ಕಾರಕ್ಕೆ **ದಿನಾಂಕ: 30-04-2023 ರೊಳಗಾಗಿ** ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಹಾಗೂ ಸಂಯೋಜನೆಗೆ ಪೂರಕವಾದ ಎಲ್ಲಾ ಅವಶ್ಯಕ ದಾಖಲೆಗಳನ್ನು PDF ಮಾದರಿಯಲ್ಲಿಯೇ UUCMS ತಂತ್ರಾಂಶದಲ್ಲಿ ಅಪ್ ಲೋಡ್ ಮಾಡುವುದು ಎಂದು ಆದೇಶಿಸಲಾಗಿತ್ತು.

2023-ರ ಏಪ್ರಿಲ್-ಮೇ ತಿಂಗಳಿನಲ್ಲಿ ಕರ್ನಾಟಕ ವಿಧಾನಸಭೆಯ ಸಾರ್ವತ್ರಿಕ ಚುನಾವಣೆಯನ್ನು ಘೋಷಿಸಿರುವುದರಿಂದ, ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳ ಶಿಕ್ಷಕರು/ಶಿಕ್ಷಕೇತರ ಸಿಬ್ಬಂದಿಗಳು ಚುನಾವಣಾ ಕರ್ತವ್ಯಕ್ಕೆ ನಿರಂತರವಾಗಿ ಹಾಜರಾಗುತ್ತಿರುವ ಕಾರಣ 2023-24ನೇ ಶೈಕ್ಷಣಿಕ ಸಾಲಿಗೆ ಸಂಯೋಜನ ಪ್ರಸ್ತಾವನೆಗಳನ್ನು UUCMS ತಂತ್ರಾಂಶದ ಮುಖಾಂತರ ನಿಗದಿತ ಅವಧಿಯೊಳಗೆ ಸಲ್ಲಿಸಲು ಸಾಧ್ಯವಾಗದ ಹಿನ್ನಲೆಯಲ್ಲಿ, ಸಂಯೋಜನಾ ಅವಧಿಯನ್ನು ವಿಸ್ತರಿಸುವಂತೆ ಕೋರಿ ವಿಶ್ವವಿದ್ಯಾಲಯಗಳು ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ.

ಆದರಂತೆ, ಸರ್ಕಾರವು, ಪ್ರಸ್ತಾವನೆಗಳನ್ನು ಕೂಲಕಂಷವಾಗಿ ಪರಿಶೀಲಿಸಿ, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು 2023-24ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ಪ್ರಸ್ತಾವನೆಗಳನ್ನು UUCMS ತಂತ್ರಾಂಶದ ಮುಖಾಂತರ ಸಲ್ಲಿಸುವ ಅವಧಿಯನ್ನು ವಿಸ್ತರಿಸುವ ಸಂಬಂಧ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂ. ಇಡಿ 47 ಯುಎನ್ಇ 2023, ಬೆಂಗಳೂರು, ದಿನಾಂಕ: 02.05.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು 2023-24ನೇ ಶೈಕ್ಷಣಿಕ ಸಾಲಿಗೆ

....2

ನಿಯಮಾನುಸಾರ ವಿವಿಧ ಸಂಯೋಜನೆ ಪ್ರಸ್ತಾವನೆಗಳನ್ನು UUCMS ತಂತ್ರಾಂಶದ ಮುಖಾಂತರ ಸಲ್ಲಿಸುವ ಕಾಲಮಿತಿಯನ್ನು ದಿನಾಂಕ:31.05.2023ರವರೆಗೆ ಅವಧಿಯನ್ನು ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.05.2023

ಕರ್ನಾಟಕ ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು 2023-24ನೇ ಸಾಲಿಗೆ ಸಂಯೋಜನಾ ಪ್ರಸ್ತಾವನೆಗಳನ್ನು UUCMS (Unified University & College Management System) ತಂತ್ರಾಂಶದಲ್ಲಿ ಸಲ್ಲಿಸಲು ಕಾಲಾವಧಿ ವಿಸ್ತರಿಸುವ ಬಗ್ಗೆ ಸರ್ಕಾರದಿಂದ ಹೊರಡಿಸಲಾಗಿರುವ ಆದೇಶ ಸಂಖ್ಯೆ: ಇಡಿ 47 ಯುಎನ್ಇ 2023, ಬೆಂಗಳೂರು ದಿನಾಂಕ:02.05.2023ನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ